ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	**359(367+368)**
ಸದಸ್ಯರ ಹೆಸರು	:	ಶ್ರೀ ಸುನೀಲ್‌ಗೌಡ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸುವ ದಿನಾಂಕ	:	**18-02-2022.**
ಉತ್ತರಿಸುವವರು	:	ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.

ಕ್ರ.ಸಂ.	ಪ್ರಶ್ನೆಗಳು	ಉತ್ತರ
(ಅ)	ಗ್ರಾಮ ಪಂಚಾಯತ್ ಅಧ್ಯಕ್ಷರು, ಉಪಾಧ್ಯಕ್ಷರು ಮತ್ತು ಸದಸ್ಯರುಗಳ ಗೌರವಧನವನ್ನು ಹೆಚ್ಚು ಮಾಡುವ ಪ್ರಸ್ತಾವನೆಯು ಯಾವ ಹಂತದಲ್ಲಿ ಇದೆ.	ಕಡತ ಸಂಖ್ಯೆ: ಗ್ರಾಅಪಂರಾ 298 ಜಿಪಸ 2021 ರಲ್ಲಿ ದಿನಾಂಕ:15.11.2021 ರಂದು ಗ್ರಾಮ ಪಂಚಾಯತಿ ಸದಸ್ಯರ ಗೌರವಧನವನ್ನು ಹೆಚ್ಚಿಸುವ ಕುರಿತು ಸರ್ಕಾರದಿಂದ ಆರ್ಥಿಕ ಇಲಾಖೆಗೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿ, ಆರ್ಥಿಕ ಇಲಾಖೆಯು ಟಿಪ್ಪಣಿ ಸಂಖ್ಯೆ: ಆಇ 549 ವೆಚ್ಚ 6/2021 ದಿನಾಂಕ: 29.11.2021 ರಲ್ಲಿ ಪ್ರಸ್ತುತ ಹೆಚ್ಚುವರಿ ಹಣಕಾಸು ಕಾರ್ಯಭಾರವನ್ನು ಭರಿಸಲು ಸಾಧ್ಯವಿಲ್ಲವೆಂದು ತಿಳಿಸಿರುತ್ತಾರೆ.
(ಆ)	ಯಾವ ಕಾಲಮಿತಿಗೆ ಒಳಪಟ್ಟು ಸದರಿ ಸದಸ್ಯರ ಮಾಸಿಕ ಗೌರವಧನವನ್ನು ಹೆಚ್ಚು ಮಾಡಲಾಗುವುದು;	ಉದ್ಭವಿಸುವುದಿಲ್ಲ.
(ಇ)	ಗ್ರಾಮ ಪಂಚಾಯತಿ ಅಧ್ಯಕ್ಷರಿಗೆ ಮಾಸಿಕ ರೂ.5000/-, ಉಪಾಧ್ಯಕ್ಷರಿಗೆ ರೂ.4000/- ಮತ್ತು ಸದಸ್ಯರಿಗೆ ರೂ.3000/- ಗೌರವಧನ ನೀಡುವ ಬಗ್ಗೆ ಸರ್ಕಾರದ ಸ್ಪಷ್ಟ ನಿಲುವೇನು;	
(ಈ)	ಗ್ರಾಮ ಪಂಚಾಯತ್ ಸದಸ್ಯರಿಗೆ ಕೇರಳ ಮಾದರಿಯಲ್ಲಿ ಸೌಲಭ್ಯಗಳನ್ನು ನೀಡುವ ಪ್ರಸ್ತಾವನೆಯು ಸರ್ಕಾರದ ಮುಂದೆ ಇದೆಯೇ; ಈ ಕುರಿತು ಸರ್ಕಾರದ ಸ್ಪಷ್ಟ ನಿಲುವೇನು;	

(ಉ)	ಗ್ರಾಮ ಪಂಚಾಯತ್ ಅಧ್ಯಕ್ಷರು ಮತ್ತು ಸದಸ್ಯರುಗಳು ಸಾರ್ವಜನಿಕ ಕೆಲಸ ಕಾರ್ಯಗಳ ನಿಮಿತ್ತ ಓಡಾಡಲು ಯಾವ ಸೌಲಭ್ಯಗಳನ್ನು ಕಲ್ಪಿಸಲಾಗಿದೆ. ಈ ಕುರಿತು ಸರ್ಕಾರದ ನಿಲುವೇನು;	ಗ್ರಾಮ ಪಂಚಾಯತ್ ಅಧ್ಯಕ್ಷರು, ಉಪಾಧ್ಯಕ್ಷರು ಮತ್ತು ಸದಸ್ಯರುಗಳು ಗ್ರಾಮ ಪಂಚಾಯತಿ ಕೆಲಸಗಳ ನಿಮಿತ್ತ ಗ್ರಾಮ ಪಂಚಾಯತಿ ಪರಿಮಿತಿಗಳಾಚೆ ಮಾಡಿದ ಪ್ರಯಾಣಗಳಿಗಾಗಿ ಕರ್ನಾಟಕ ಪಂಚಾಯತ್ ರಾಜ್ (ಗ್ರಾಮ ಪಂಚಾಯತ್ ಅಧ್ಯಕ್ಷ, ಉಪಾಧ್ಯಕ್ಷ ಮತ್ತು ಸದಸ್ಯರುಗಳ ಪ್ರಯಾಣ ಭತ್ಯೆ ಮತ್ತು ದಿನಭತ್ಯೆ) ನಿಯಮಗಳು, 1994 ರನ್ವಯ ಪ್ರಯಾಣ ಭತ್ಯೆ ಹಾಗೂ ದಿನ ಭತ್ಯೆಗಳನ್ನು ಪಡೆಯಲು ಅವಕಾಶ ಕಲ್ಪಿಸಲಾಗಿದೆ.
(ಊ)	ಗ್ರಾಮ ಪಂಚಾಯತ್ ಅಧ್ಯಕ್ಷರಿಗೆ, ಉಪಾಧ್ಯಕ್ಷರಿಗೆ ಮತ್ತು ಸದಸ್ಯರುಗಳಿಗೆ ಯಾವ ಯಾವ ಸೌಲಭ್ಯಗಳನ್ನು ನೀಡಲಾಗಿದೆ ವಿವರವಾದ ಮಾಹಿತಿ ನೀಡಿ?	ಗ್ರಾಮ ಪಂಚಾಯತ್ ಅಧ್ಯಕ್ಷರು, ಉಪಾಧ್ಯಕ್ಷರಿಗೆ ಮತ್ತು ಸದಸ್ಯರುಗಳಿಗೆ ನೀಡಲಾಗುವ ಸೌಲಭ್ಯಗಳು- 1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಮ 116 ಜಿಪಸ 2019, ದಿನಾಂಕ: 03.05.2017ರನ್ವಯ ಮಾಹೆಯಾನ ಅಧ್ಯಕ್ಷರಿಗೆ ರೂ. 3000/-, ಉಪಾಧ್ಯಕ್ಷರುಗಳಿಗೆ ರೂ. 2000/- ಹಾಗೂ ಸದಸ್ಯರುಗಳಿಗೆ ರೂ. 1000/- ಗಳನ್ನು ಗೌರವಧನವಾಗಿ ನೀಡಲಾಗುತ್ತಿದೆ. 2. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 155 ಜಿಪಸ 2003, ದಿನಾಂಕ:01-08-2003ರನ್ವಯ ಉಪವೇಶನ ಶುಲ್ಕವನ್ನು ನೀಡಲಾಗುತ್ತಿದೆ. 3. ಗ್ರಾಮ ಪಂಚಾಯತ್ ಅಧ್ಯಕ್ಷರು, ಉಪಾಧ್ಯಕ್ಷರು ಮತ್ತು ಸದಸ್ಯರುಗಳು ಗ್ರಾಮ ಪಂಚಾಯತಿ ಕೆಲಸಗಳ ನಿಮಿತ್ತ ಗ್ರಾಮ ಪಂಚಾಯತಿ ಪರಿಮಿತಿಗಳಾಚೆ ಮಾಡಿದ ಪ್ರಯಾಣಗಳಿಗಾಗಿ ಕರ್ನಾಟಕ ಪಂಚಾಯತ್ ರಾಜ್ (ಗ್ರಾಮ ಪಂಚಾಯತ್ ಅಧ್ಯಕ್ಷ, ಉಪಾಧ್ಯಕ್ಷ ಮತ್ತು ಸದಸ್ಯರುಗಳ ಪ್ರಯಾಣ ಭತ್ಯೆ ಮತ್ತು ದಿನಭತ್ಯೆ) ನಿಯಮಗಳು, 1994 ರನ್ವಯ ಪ್ರಯಾಣ ಭತ್ಯೆ ಹಾಗೂ ದಿನ ಭತ್ಯೆಗಳನ್ನು ಪಡೆಯಲು ಅವಕಾಶ ಕಲ್ಪಿಸಲಾಗಿದೆ.

ಸಂಖ್ಯೆ: ಗ್ರಾಅಪಂರಾ 74 ಜಿಪಸ 2022

(ಕೆ.ಎಸ್.ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

ಕೆ.ಎಸ್. ಈಶ್ವರಪ್ಪ
ಗ್ರಾಮೀಣಾಭಿವೃದ್ಧಿ ಮತ್ತು
ಪಂಚಾಯತ್ ರಾಜ್ ಸಚಿವರು